# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 368 |
| 2. ಸದಸ್ಯರ ಹೆಸರು | : | ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) |
| 3. ಉತ್ತರಿಸಬೇಕಾದ ದಿನಾಂಕ | : | 07.12.2023. |
| 4. ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಗಳು |

<table>
<tr><th>ಕ್ರ.<br>ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>2018-19ನೇ ಸಾಲಿನಿಂದ 2022-23ರ ಸಾಲಿನವರೆಗಿನ ಅವಧಿಯಲ್ಲಿ ಕೇಂದ್ರ ಸರ್ಕಾರದಿಂದ ವಿವಿಧ ಯೋಜನೆಗಳಿಗಾಗಿ ಹಾಗೂ ಸಾಮಾಜಿಕ ಭದ್ರತಾ ಯೋಜನೆಗಳಿಗಾಗಿ ಬಿಡುಗಡೆಯಾದ ಅನುದಾನ ಎಷ್ಟು;</td><td>ಕೇಂದ್ರ ಸರ್ಕಾರದಿಂದ 2018-19ನೇ ಸಾಲಿನಿಂದ 2022-23ರ ಸಾಲಿನವರೆಗಿನ ಅವಧಿಯಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಹಾಗೂ ಸಾಮಾಜಿಕ ಭದ್ರತಾ ಯೋಜನೆಗಳಿಗೆ ಸ್ವೀಕೃವಾದ ಅನುದಾನದ ವಿವರಗಳು ಈ ಕೆಳಕಂಡಂತಿದೆ.<br><br>ರೂ.ಕೋಟಿಗಳಲ್ಲಿ
<table>
<tr><th>ವರ್ಷ</th><th>ಕೇಂದ್ರ ಸರ್ಕಾರದ ಯೋಜನೆಗಳು</th><th>ಸಾಮಾಜಿಕ ಭದ್ರತಾ ಯೋಜನೆಗಳು</th></tr>
<tr><td>2018-19</td><td>9,872</td><td>522</td></tr>
<tr><td>2019-20</td><td>11,868</td><td>522</td></tr>
<tr><td>2020-21</td><td>9,375</td><td>665</td></tr>
<tr><td>2021-22</td><td>12,176</td><td>494</td></tr>
<tr><td>2022-23</td><td>17,960*</td><td>447</td></tr>
</table>
•2022-23 ರಲ್ಲಿ ಕೇಂದ್ರ ಯೋಜನೆಗಳಿಗೆ ಭಾರತ ಸರ್ಕಾರವು ನೇರವಾಗಿ ಅನುಷ್ಠಾನ ಇಲಾಖೆಗಳ ಖಾತೆಗೆ (SNA-Single Nodal Account) ಜಮೆ ಮಾಡಿರುವ ಅನುದಾನದ ಮೊತ್ತ 6,739 ಕೋಟಿ ರೂ.ಗಳನ್ನು ಒಳಗೊಂಡಿರುತ್ತದೆ.<br><br>•ಈ ಮೇಲೆ ತಿಳಿಸಿರುವ ಕೇಂದ್ರ ಪುರಸ್ಕೃತ ಯೋಜನೆಗಳ ಅನುದಾನ ಹೊರತುಪಡಿಸಿ 2022-23ರಲ್ಲಿ ಕೇಂದ್ರದಿಂದ ಹಣಕಾಸು ಆಯೋಗದ ಅನುದಾನ ಹಾಗು SDRF/NDRF ಗೆ ಒಟ್ಟು 4,435 ಕೋಟಿ ರೂ.ಗಳ ಅನುದಾನ ಬಿಡುಗಡೆಯಾಗಿರುತ್ತದೆ.</td></tr>
<tr><td>ಆ</td><td>ಈ ಅನುದಾನದಲ್ಲಿ ಖರ್ಚಾದ ಅನುದಾನ ಎಷ್ಟು; ಉಳಿದಿರುವ ಅನುದಾನ ಎಷ್ಟು; ಉಳಿದಿರುವ ಅನುದಾನವನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳುವಲ್ಲಿ ಆರ್ಥಿಕ ಇಲಾಖೆ</td><td>ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಆಯಾ ಯೋಜನೆಯ ಅನುಪಾತಕ್ಕೆ ಅನುಗುಣವಾಗಿ ಕೇಂದ್ರದ ಪಾಲಿನೊಂದಿಗೆ ರಾಜ್ಯದ ಪಾಲನ್ನು ಸೇರಿಸಿ ವೆಚ್ಚವನ್ನು ಭರಿಸುತ್ತದೆ ರಾಜ್ಯ ಹಾಗು ಕೇಂದ್ರ ಪಾಲು ಸೇರಿ 2018-19ನೇ ಸಾಲಿನಿಂದ 2022-23ರ ಸಾಲಿನವರೆಗಿನ</td></tr>
</table>

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td></td><td>ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ವಿವರಗಳನ್ನು ಒದಗಿಸುವುದು)</td><td>ಅವಧಿಯಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಹಾಗೂ ಸಾಮಾಜಿಕ ಭದ್ರತಾ ಯೋಜನೆಗಳಿಗೆ ಖರ್ಚಾದ ಒಟ್ಟು ಅನುದಾನದ ವಿವರಗಳು ಈ ಕೆಳಕಂಡಂತಿದೆ.<br><br>ರೂ.ಕೋಟಿಗಳಲ್ಲಿ<br><br>
<table>
<tr><th>ವರ್ಷ</th><th>ಖರ್ಚಾದ ಅನುದಾನ (ಕೇಂದ್ರ + ರಾಜ್ಯದ ಪಾಲು)</th></tr>
<tr><td>2018-19</td><td>30,406</td></tr>
<tr><td>2019-20</td><td>30,041</td></tr>
<tr><td>2020-21</td><td>30,202</td></tr>
<tr><td>2021-22</td><td>36,956</td></tr>
<tr><td>2022-23</td><td>30,965</td></tr>
</table>
<br>2022-23ರ ಅಂತ್ಯಕ್ಕೆ ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಭಾರತ ಸರ್ಕಾರದಿಂದ ಬಿಡುಗಡೆಯಾದ ಅನುದಾನದಲ್ಲಿ ಖರ್ಚಾಗದೇ ಉಳಿದ ಅನುದಾನ 7,997 ಕೋಟಿ ರೂ.ಗಳು. ಕೇಂದ್ರ ಸರ್ಕಾರವು ಮಾರ್ಚ್ ತಿಂಗಳ ಅಂತ್ಯದಲ್ಲಿ ಸುಮಾರು 4,156 ಕೋಟಿ ರೂ.ಗಳು ಅನುದಾನವನ್ನು ಯೋಜನೆಗಳಿಗೆ ಬಿಡುಗಡೆ ಮಾಡಿರುತ್ತದೆ ಆದ್ದರಿಂದ 2022-23ರ ಅಂತ್ಯಕ್ಕೆ ಖರ್ಚಾಗದೇ ಉಳಿದ ಅನುದಾನದ ಮೊತ್ತವು ಹೆಚ್ಚಾಗಿರುತ್ತದೆ.<br><br>ಕೇಂದ್ರ ಸರ್ಕಾರವು, ಯೋಜನೆಗಳಿಗೆ ನೀಡುವ ಅನುದಾನದಲ್ಲಿ ಖರ್ಚಾಗದೇ ಉಳಿದ ಮೊತ್ತವು ಮುಂದಿನ ಆರ್ಥಿಕ ವರ್ಷದ ಆರಂಭಿಕ ಶುಲ್ಕವಾಗಲಿದೆ. ಈ ಮೊತ್ತವನ್ನು ಕೇಂದ್ರ ಸರ್ಕಾರವು ಹಿಂಪಡೆಯುವುದಿಲ್ಲ ಬದಲಿಗೆ ಮುಂದಿನ ಆರ್ಥಿಕ ವರ್ಷದಲ್ಲಿ ಕೇಂದ್ರದ ಯೋಜನೆಗಳಿಗೆ ಈ ಅನುದಾನವನ್ನು ಬಳಕೆ ಮಾಡಿಕೊಳ್ಳಲಾಗುವುದು.<br><br>ಕೇಂದ್ರದಿಂದ ಬಿಡುಗಡೆಯಾದ ಅನುದಾನವನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳಲು ಆರ್ಥಿಕ ಇಲಾಖೆಯ ವತಿಯಿಂದ ಮತ್ತು ಸರ್ಕಾರದ ಮುಖ್ಯ ಕಾರ್ಯದರ್ಶಿರವರು ಇಲಾಖೆಗಳೊಂದಿಗೆ ನಿರಂತರ ಸಭೆಗಳನ್ನು ಮಾಡಿ ಅನುದಾನವನ್ನು ತ್ವರಿತವಾಗಿ ಉಪಯೋಗಿಸಿಕೊಳ್ಳಲು ಸೂಚಿಸಿರುತ್ತಾರೆ.</td></tr>
</table>

<table>
<tr><th>ಕ್ರ ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಇ</td><td>ಪ್ರಸಕ್ತ ಸಾಲಿನಲ್ಲಿ ಕೇಂದ್ರ ಸರ್ಕಾರ ವಿವಿಧ ಯೋಜನೆಗಳಿಗಾಗಿ ಮತ್ತು ಸಾಮಾಜಿಕ ಭದ್ರತಾ ಯೋಜನೆಗಳಿಗಾಗಿ ಬಿಡುಗಡೆ ಮಾಡಬೇಕಾಗಿದ್ದ ಅನುದಾನ ಎಷ್ಟು.</td><td>ಆರ್ಥಿಕ ವರ್ಷದಲ್ಲಿ ಕೇಂದ್ರ ಸರ್ಕಾರ ವಿವಿಧ ಯೋಜನೆಗಳಿಗಾಗಿ ಮತ್ತು ಸಾಮಾಜಿಕ ಭದ್ರತಾ ಯೋಜನೆಗಳಿಗಾಗಿ ನೀಡುವ ಅನುದಾನವು ಕೇಂದ್ರ ಸರ್ಕಾರದ ಸ್ವೀಕೃತಿಯ ಮೇಲೆ ಅವಲಂಬಿಸಿದೆ ಹಾಗು ರಾಜ್ಯ ಸರ್ಕಾರವು ಕೇಂದ್ರದ ಯೋಜನೆಗಳಿಗೆ ವಿನಿಯೋಗಿಸಿದ ಅನುದಾನದ ಬಳಕೆ ಪ್ರಮಾಣವನ್ನು ಆಧಾರಿಸಿರುತ್ತದೆ.</td></tr>
<tr><td>ಈ</td><td>ಈವರೆಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು;</td><td>2023-24ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ವಿವಿಧ ಯೋಜನೆಗಳಿಗಾಗಿ ಮತ್ತು ಸಾಮಾಜಿಕ ಭದ್ರತಾ ಯೋಜನೆಗಳಿಗಾಗಿ ನವೆಂಬರ್ ಅಂತ್ಯದವರೆಗೆ ಬಿಡುಗಡೆ ಮಾಡಿದ ಅನುದಾನದ ವಿವರಗಳು ಕೆಳಕಂಡಂತಿದೆ<br><br>ರೂ.ಕೋಟಿಗಳಲ್ಲಿ<br>
<table>
<tr><th>ವರ್ಷ</th><th>ನವೆಂಬರ್ ಅಂತ್ಯಕ್ಕೆ ಬಿಡುಗಡೆಯಾದ ಅನುದಾನ</th></tr>
<tr><td>ಕೇಂದ್ರ ಸರ್ಕಾರದ ಯೋಜನೆಗಳು</td><td>10,337*</td></tr>
<tr><td>ಸಾಮಾಜಿಕ ಭದ್ರತಾ ಯೋಜನೆಗಳು</td><td>0</td></tr>
</table>
*2023-24 ರಲ್ಲಿ ಕೇಂದ್ರ ಯೋಜನೆಗಳಿಗೆ ಭಾರತ ಸರ್ಕಾರವು ನೇರವಾಗಿ ಅನುಷ್ಠಾನ ಇಲಾಖೆಗಳ ಖಾತೆಗೆ (SNA-Single Nodal Account) ಜಮೆ ಮಾಡಿರುವ ಅನುದಾನದ ಮೊತ್ತ 4.191 ಕೋಟಿ ರೂ.ಗಳನ್ನು ಒಳಗೊಂಡಿರುತ್ತದೆ.</td></tr>
<tr><td>ಉ</td><td>ಕೇಂದ್ರ ಸರ್ಕಾರದಿಂದ ಉಳಿಕೆ ಅನುದಾನವನ್ನು ಬಿಡುಗಡೆ ಮಾಡಿಸುವಲ್ಲಿ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಇದಕ್ಕೆ ಪೂರಕವಾಗಿ ಸ್ಪಂದಿಸಿದೆಯೇ ಅಥವಾ ಇಲ್ಲವೆ? (ವಿವರವನ್ನು ಒದಗಿಸುವುದು)</td><td>ಕೇಂದ್ರ ಸರ್ಕಾರವು ಯೋಜನೆಗಳಿಗೆ ಬಾಕಿ ಉಳಿದಿರುವ ಅನುದಾನವನ್ನು ಬಿಡುಗಡೆ ಮಾಡಲು ಸಂಬಂಧಿಸಿದ ಯೋಜನೆಗಳ SNA ಖಾತೆಗಳಲ್ಲಿ ಉಳಿದಿರುವ ಬಾಕಿಯನ್ನು ಖರ್ಚು ಮಾಡುವಂತೆ ಆಡಳಿತ ಇಲಾಖೆಗಳಿಗೆ ಸೂಚಿಸಲಾಗಿರುತ್ತದೆ. ಅಲ್ಲದೆ, ಆರ್ಥಿಕ ಇಲಾಖೆಯ ವತಿಯಿಂದ ಹಾಗು ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಆಡಳಿತ ಇಲಾಖೆಗಳೊಂದಿಗೆ ಸಭೆಗಳನ್ನು ನಡಿಸಿ ಸಂಬಂಧಿಸಿದ ಆಡಳಿತ ಇಲಾಖೆಗಳು ಕೇಂದ್ರ ಸರ್ಕಾರದೊಂದಿಗೆ ವ್ಯವಹರಿಸುವುದರೊಂದಿಗೆ ಅನುಸರಣಾ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿರುತ್ತಾರೆ. ದೆಹಲಿಯಲ್ಲಿ ಕರ್ನಾಟಕ ಭವನದ ಅಧಿಕಾರಿಗಳು ಸಹ ಕೇಂದ್ರ ಯೋಜನೆಗಳಿಗೆ</td></tr>
</table>

| ಕ್ರ ಸಂ | ಪ್ರಶ್ನೆ | ಉತ್ತರ |
| --- | --- | --- |
| | | ಹಣ ಬಿಡುಗಡೆ ಮಾಡುವ ಸಂಬಂಧ ಭಾರತ ಸರ್ಕಾರದೊಂದಿಗೆ ನಿರಂತರ ಸಂಪರ್ಕದಲ್ಲಿರುತ್ತಾರೆ.<br><br>ಮಾನ್ಯ ಮುಖ್ಯ ಮಂತ್ರಿಯವರು ರಾಜ್ಯಕ್ಕೆ ಕೇಂದ್ರದಿಂದ ಬಾಕಿಯಿರುವ ಹಣಕಾಸು ಆಯೋಗದ ವಿಶೇಷ ಅನುದಾನ, ಜಿ ಎಸ್.ಟಿ ಪರಿಹಾರ ಹಾಗು ವಿಪತ್ತು ಪರಿಹಾರವನ್ನು ಬಿಡುಗಡೆ ಮಾಡಲು ಪ್ರಧಾನ ಮಂತ್ರಿ ಹಾಗು ಕೇಂದ್ರ ವಿತ್ತೀಯ ಮಂತ್ರಿಯವರಿಗೆ ಕ್ರಮವಾಗಿ ದಿನಾಂಕ 19.08.2023, 06.10.2023 ಹಾಗು 27.11.2023 ರಂದು ಪತ್ರ ಬರೆದಿರುತ್ತಾರೆ. |

ಸಂಖ್ಯೆ: ಆಇ 61 ಬಿಜಿಎಲ್ 2023

(ಸಿದ್ದರಾಮಯ್ಯ)
ಮುಖ್ಯಮಂತ್ರಿ